# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 865 |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 19.08.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಬೇಡಿಕೆಗನುಗುಣವಾಗಿ ಮರಳು ಪೂರೈಕೆಯಾಗದೇ ಇರುವುದರಿಂದ ಕಟ್ಟಡ ನಿರ್ಮಾಣ ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಳ್ತಂಗಡಿ ತಾಲ್ಲೂಕಿನಲ್ಲಿ ಮರಳು ಪೂರೈಕೆಗೆ ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ:<br><br>1. ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು Non-CRZ ಪ್ರದೇಶದ IV, V ಮತ್ತು ಉನ್ನತ ಶ್ರೇಣಿಯ ಹಳ್ಳ/ ನದಿ ಪಾತ್ರಗಳಲ್ಲಿ 03 ಮರಳು ಬ್ಲಾಕ್ ಗಳಲ್ಲಿ ಗಣಿಗಾರಿಕೆ ನಡೆಸಿ ತಾಲ್ಲೂಕಿನ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಕೆಯಾಗುತ್ತಿದೆ.<br><br>2. ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಗುತ್ತಿಗೆ ಅವಧಿ ಮುಗಿದಿರುವ 04 ಮರಳು ಬ್ಲಾಕ್ ಗಳು ಮತ್ತು ಹೊಸದಾಗಿ ಗುರುತಿಸಿರುವ 05 ಮರಳು ಬ್ಲಾಕ್ ಗಳು ಸೇರಿದಂತೆ ಒಟ್ಟು 09 ಮರಳು ಬ್ಲಾಕ್ ಗಳನ್ನು ತಾಲ್ಲೂಕು ಮರಳು ಸಮಿತಿಯಿಂದ ಜಂಟಿ ಸ್ಥಳ ಪರಿಶೀಲನೆ ನಡೆಸಿ ಜಿಲ್ಲಾ ಮರಳು ಸಮಿತಿಯ ಅನುಮೋದನೆಯೊಂದಿಗೆ ಟೆಂಡರ್ ಕಂ ಹರಾಜು ಮೂಲಕ ನಿಯಮಾನುಸಾರ ಸದರಿ ಮರಳು ಬ್ಲಾಕ್ ಗಳಿಗೆ ಗುತ್ತಿಗೆ ಮಂಜೂರಾತಿಗೆ ಕ್ರಮ ವಹಿಸಲಾಗುತ್ತದೆ.<br><br>3. ಪ್ರಸ್ತುತ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ 2 ಎಂ-ಸ್ಯಾಂಡ್ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಘಟಕಗಳಿಂದ ತಾಲ್ಲೂಕಿನ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಎಂ-ಸ್ಯಾಂಡ್ ಪೂರೈಕೆಯಾಗುತ್ತಿದೆ.<br><br>ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ 68 ಮರಳು ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಬೆಳ್ತಂಗಡಿ ತಾಲ್ಲೂಕಿನಲ್ಲಿ ಸುಮಾರು ಒಟ್ಟು 68 ಕಡೆಗಳಲ್ಲಿ ಮರಳು ತೆಗೆಯಬಲ್ಲ ಬ್ಲಾಕ್ ಗಳನ್ನು ಈಗಾಗಲೇ ಗುರುತಿಸಿ ವರದಿ ಸಲ್ಲಿಸಲಾಗಿದ್ದರೂ, ಸದರಿ ಗುರುತಿಸಿರುವ ಸ್ಥಳಗಳಲ್ಲಿ ಮರಳು ತೆಗೆಯಲು ಇದುವರೆವಿಗೂ ಅವಕಾಶ ಕಲ್ಪಿಸದಿರಲು ಕಾರಣಗಳೇನು; | |
| ಇ) | ಯಾವ ಕಾಲಮಿತಿಯೊಳಗೆ ಬೆಳ್ತಂಗಡಿ ತಾಲ್ಲೂಕಿನಲ್ಲಿ ಕಟ್ಟಡ ನಿರ್ಮಾಣ ಕ್ಷೇತ್ರಕ್ಕೆ ಅತ್ಯವಶ್ಯವಾಗಿ ಬೇಕಾಗಿರುವ ಮರಳು ಬೇಡಿಕೆಗನುಗುಣವಾಗಿ ಸಕಾಲದಲ್ಲಿ ಪೂರೈಕೆಯಾಗಲು ಅನುವಾಗುವಂತೆ ಈಗಾಗಲೇ ಗುರುತಿಸಿರುವ ಸುಮಾರು ಒಟ್ಟು 68 ಸ್ಥಳಗಳಲ್ಲಿ ಮರಳು ತೆಗೆಯಲು ಅವಕಾಶ ಕಲ್ಪಿಸಲಾಗುವುದು ? | |

**ಸಂಖ್ಯೆ:** ಸಿಐ -ಎಂಎಂಎನ್/219/2025

(signature)

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.